## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **2014-15**ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳ ಬಾಕಿ ಪಾವತಿಗಾಗಿ ಅನುದಾನ ಲಭ್ಯತೆ ಇರುವ ಮೈಸೂರು ಜಿಲ್ಲಾ ಪಂಚಾಯಿತಿಯಿಂದ ಕೇಂದ್ರ ಸಹಾಯಧನ ರೂ.9.75 ಲಕ್ಷಗಳನ್ನು ಹಿಂಪಡೆದು ಉಡುಪಿ ಜಿಲ್ಲಾ ಪಂಚಾಯತ್‌ಗೆ ವರ್ಗಾಯಿಸುವ ಕುರಿತು

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ಅ.ಸ ಪತ್ರ ಸಂಖ್ಯೆ :ಜಿಪಂಉ/ಅಭಿವೃದ್ಧಿ/ಸಿಆರ್17/2015-16 ದಿನಾಂಕ 17.03.2016

## ಪ್ರಸ್ತಾವನೆ :

ಮೇಲೆ ಓದಲಾದಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ರವರು **2014-15**ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಸಹಾಯಧನ ಬಾಕಿ ಪಾವತಿಸಲು **ರೂ.9.75**ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುವುದನ್ನು ಪರಿಶೀಲಿಸಿದ್ದು, **2014-15**ನೇ ಸಾಲಿನಲ್ಲಿ ಕಾರ್ಯಕ್ರಮದಡಿ ಮೈಸೂರು ಜಿಲ್ಲಾ ಪಂಚಾಯತ್‌ಗೆ ಬಿಡುಗಡೆಯಾದ ಕೇಂದ್ರ ಸಹಾಯಧನ ವೆಚ್ಚವಾಗದೇ ಉಳಿಕೆಯಾಗಿರುವ ಹಿನ್ನೆಲೆಯಲ್ಲಿ ಅಗತ್ಯವಿರುವ ಅನುದಾನವನ್ನು ಕಾರ್ಯಕ್ರಮದ ಹಿತದೃಷ್ಟಿಯಿಂದ ಹಿಂಪಡೆದು **ರೂ.9.75**ಲಕ್ಷಗಳನ್ನು ಉಡುಪಿ ಜಿಲ್ಲೆಗೆ ವರ್ಗಾಯಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/38/ಜೈಅಯೋ/2016 ಬೆಂಗಳೂರು, ದಿನಾಂಕ 11.05.2016**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2014-15**ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಮೈಸೂರು ಜಿಲ್ಲಾ ಪಂಚಾಯತ್‌ಗೆ ಬಿಡುಗಡೆಯಾದ ಕೇಂದ್ರ ಸಹಾಯಧನದಡಿ ಉಳಿಕೆಯಾದ ಅನುದಾನದಲ್ಲಿ ಅಗತ್ಯವಿರುವ ಅನುದಾನ **ರೂ.9.75(ಒಂಬತ್ತು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಮಾತ್ರ ಹಿಂಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿರವರಿಗೆ 2014-15ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಕೇಂದ್ರ ಸಹಾಯಧನ ಬಾಕಿ ಪಾವತಿಸಲು ವರ್ಗಾಯಿಸಿ ಆದೇಶಿಸಿದೆ.

ಹಾಲಿ ವರ್ಗಾಯಿಸಲಾದ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು ಹಾಗೂ **"ಗಾಂಧಿ ಸಾಕ್ಷಿ ಕಾಯಕ"** ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನವನ್ನು ಮೈಸೂರು ಜಿಲ್ಲಾ ಪಂಚಾಯತಿಯಿಂದ ಉಡುಪಿ ಜಿಲ್ಲಾ ಪಂಚಾಯತ್‌ಗೆ ವರ್ಗಾಯಿಸಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ರವರು ಕಾರ್ಯಕ್ರಮದಡಿ ಹಿಂಪಡೆದ ಕೇಂದ್ರ ಸಹಾಯಧನವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉಡುಪಿ ರವರಿಗೆ **RTGS/DD** ಮುಖೇನ ವರ್ಗಾಯಿಸುವುದು.

ಸದರಿ ಅನುದಾನವನ್ನು 2014-15ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಪಾವತಿಗಾಗಿ ವಿನಿಯೋಗಿಸುವುದು ಹಾಗೂ **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ವೆಚ್ಚ ಭರಿಸತಕ್ಕದ್ದು. ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ಮತ್ತು ಮೈಸೂರು ಉಪಕಾರ್ಯದರ್ಶಿ (ಅಭಿವೃದ್ಧಿ) / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ಮತ್ತು ಮೈಸೂರು

**ಪ್ರತಿಯನ್ನು :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.